## 56. ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಗೆ ರಾಜ್ಯ ಸರ್ಕಾರದ ತಯಾರಿ

ಕೇಂದ್ರದ ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಗೊಳಿಸಲು ತುದಿಗಾಲಲ್ಲಿ ನಿಂತಿರುವ ರಾಜ್ಯ ಸರ್ಕಾರ, ಈ ನೀತಿಯನ್ನು ಮೊದಲು ಅನುಷ್ಠಾನಗೊಳಿಸುವ ರಾಜ್ಯಗಳ ಪಟ್ಟಿಯಲ್ಲಿ ಮುಂಚೂಣಿಯಲ್ಲಿ ನಿಲ್ಲಲು ಕಾತುರವಾಗಿದೆ.

ಆಗಸ್ಟ್‌ನಲ್ಲಿ ಹೊಸ ಶಿಕ್ಷಣ ನೀತಿ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಕ್ರಿಯಾಯೋಜನೆ ವರದಿ ಸಿದ್ಧಪಡಿಸಲು ಸರ್ಕಾರವು ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಗಡುವು ನೀಡಿದೆ. ರಾಜ್ಯದ ಆಶಯಗಳು, ಅನುಷ್ಠಾನ ಪ್ರಕ್ರಿಯೆ ಹೇಗಿರಬೇಕು, ಇದಕ್ಕೆ ಸಂಬಂಧಿಸಿದ ಕಾನೂನುಗಳ ರಚನೆ ಮತ್ತಿತರ ಅಂಶಗಳನ್ನು ಈ ಕ್ರಿಯಾಯೋಜನೆ ಒಳಗೊಂಡಿರುತ್ತದೆ.

ಈ ಸಂಬಂಧ ಶಿಕ್ಷಣ ಇಲಾಖೆ ಅಧಿಕಾರಿಗಳೊಂದಿಗೆ ನಡೆಸಿದ ಸಭೆಯಲ್ಲಿ ಮಾತನಾಡಿದ ಶಿಕ್ಷಣ ಸಚಿವರು 'ನೂತನ ರಾಷ್ಟ್ರೀಯ ಶಿಕ್ಷಣ ನೀತಿ(ಎನ್‌ಇಪಿ)–2019' ಅನ್ನು ವ್ಯವಸ್ಥಿತವಾಗಿ ಜಾರಿಗೊಳಿಸಲಿರುವ ಮೊದಲ ರಾಜ್ಯಗಳಲ್ಲಿ ಕರ್ನಾಟಕ ಕೂಡ ಒಂದಾಗಿರಬೇಕು. ಈ ನಿಟ್ಟಿನಲ್ಲಿ ಮುಂದಿನ 15 ದಿನಗಳಲ್ಲಿ ಕೇಂದ್ರದ ಹಾಗೂ ರಾಜ್ಯದ ನೀತಿಗಳ ಕುರಿತು ಅಧ್ಯಯನ ನಡೆಸಿ, ವರದಿಯನ್ನು ಹೊರತರಲು ಕ್ರಮ ವಹಿಸಬೇಕು. ಸಾಧ್ಯವಾದರೆ, ಆಗಸ್ಟ್ 20ಕ್ಕೆ ಅದನ್ನು ಲೋಕಾರ್ಪಣೆಗೊಳಿಸಬೇಕು ಎಂದು ಹೇಳಿದರು.

ರಾಷ್ಟ್ರೀಯ ಶಿಕ್ಷಣ ನೀತಿ ರೂಪುರೇಷೆ ಪ್ರಕಟಗೊಂಡಿದ್ದು, ಇಡೀ ದೇಶದ ಶಿಕ್ಷಣ ವ್ಯವಸ್ಥೆಗೆ ಹೊಸದಿಕ್ಕು ತೋರಿಸಿದೆ. ಸ್ವಾತಂತ್ರ್ಯ ನಂತರ ಕೇವಲ ಎರಡು ಬಾರಿ ಶಿಕ್ಷಣ ನೀತಿ ಪರಿಷ್ಕರಣೆಗೊಂಡಿರುವುದು ಮತ್ತು ಇಂದಿನ ಸವಾಲುಗಳನ್ನು ಸಮರ್ಥವಾಗಿ ಎದುರಿಸುವ ರೀತಿಯಲ್ಲಿ ಕೇಂದ್ರ ಸರ್ಕಾರವು ನೀತಿಯನ್ನು ಪ್ರಕಟಿಸಿದೆ. ಇದನ್ನು ಜಾರಿಗೊಳಿಸುವುದು ನಮ್ಮ ಜವಾಬ್ದಾರಿ. ಕರ್ನಾಟಕದ ಅವಶ್ಯಕತೆಗಳಿಗೆ ಅನುಗುಣವಾಗಿ ಇದಕ್ಕೆ ಪೂರಕವಾದ ರೂಪುರೇಷೆ ಸಿದ್ಧಪಡಿಸಬೇಕು ಎಂದು ಸೂಚಿಸಿದರು. ಈ ಮಧ್ಯೆ 'ರಾಷ್ಟ್ರೀಯ ಶಿಕ್ಷಣ ನೀತಿಯ ಕರಡು'ಗೆ ಪೂರಕವಾಗಿ ಇದೇ ಫೆಬ್ರವರಿಯಲ್ಲಿ ವಿಶೇಷ ಶಿಕ್ಷಣ ನೀತಿ ರೂಪಿಸಲು ಸಮಿತಿ ರಚಿಸಲಾಗಿತ್ತು. ಇದರಲ್ಲಿನ ಅಂಶಗಳು ಕೂಡ ಈಗ ತ್ವರಿತವಾಗಿ ಹೊಸ ನೀತಿ ಜಾರಿಗೊಳಿಸಲು ಅನುಕೂಲ ಆಗಲಿದೆ.

ಕೇರಳ ನನ್ನ ಜನ್ಮಭೂಮಿಯಾಗಿದ್ದರೂ ಕರ್ನಾಟಕ ನನ್ನ ಕರ್ಮಭೂಮಿ. ಕರ್ನಾಟಕ ನನ್ನ ರಾಜ್ಯ ಎಂದ ಕಸ್ತೂರಿ ರಂಗನ್, ಭಾರತ ದೇಶ ವಿವಿಧ ರೀತಿಯ ಸಾಮಾಜಿಕ, ಭಾಷೆ, ಧರ್ಮ, ಸಂಸ್ಕೃತಿ, ಗ್ರಾಮೀಣ, ನಗರ, ಗುಡ್ಡಗಾಡು, ಅಭಿವೃದ್ಧಿ ಹೊಂದಿದ, ಹಿಂದುಳಿದ ಪ್ರದೇಶಗಳಂತಹ ಹಲವು ಸ್ತರಗಳ ಪ್ರದೇಶಗಳನ್ನೊಳಗೊಂಡಿದ್ದು, ಮುಂದಿನ 20ವರ್ಷಗಳಲ್ಲಿ ದೇಶವು ಕ್ಷಿಪ್ರವಾಗಿ ಅಭಿವೃದ್ಧಿ ಹೊಂದುವ ನಿಟ್ಟಿನಲ್ಲಿ ಹೊಸ ಶಿಕ್ಷಣ ನೀತಿಯನ್ನು ರೂಪಿಸಲಾಗಿದೆ ಎಂದರು. ತಾವು ಕರ್ನಾಟಕದಲ್ಲಿ ಕಳೆದ ದಿನಗಳನ್ನು ಸ್ಮರಿಸಿಕೊಂಡ ಕಸ್ತೂರಿ ರಂಗನ್ ನಾಡಿನ ಶೈಕ್ಷಣಿಕ ಅಭಿವೃದ್ಧಿಯ ನಿಟ್ಟಿನಲ್ಲಿ ತಮ್ಮ ಉತ್ಸುಕತೆ, ಆಸಕ್ತಿ ಮೆಚ್ಚುವಂತಹದ್ದಾಗಿದೆ. ಕರ್ನಾಟಕ ಈಗಾಗಲೇ ಶೈಕ್ಷಣಿಕವಾಗಿ ಇಡೀ ದೇಶದಲ್ಲೇ ಮುಂಚೂಣಿಯಲ್ಲಿರುವುದನ್ನು ರಾಷ್ಟ್ರ ಗಮನಿಸಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕರ್ನಾಟಕದಲ್ಲಿ ಈಗಾಗಲೇ ಅನುಷ್ಠಾನದಲ್ಲಿರುವ ಬಹುತೇಕ ಸಂಗತಿಗಳು ಹೊಸ ಶಿಕ್ಷಣ ನೀತಿಯಲ್ಲಿ ಅಳವಡಿಕೆಯಾಗಿದ್ದು, ಹೊಸ ನೀತಿಯಲ್ಲಿ ಕರ್ನಾಟಕದ ಕೊಡುಗೆ ಅಪಾರ. ದೇಶದ ಶಿಕ್ಷಣ ವ್ಯವಸ್ಥೆಯು ರಾಷ್ಟ್ರೀಯ ಶಿಕ್ಷಣ ನೀತಿಯ ಪ್ರಯೋಜನವನ್ನು ಪಡೆಯುವ ಮೊದಲೇ ದೂರದೃಷ್ಟಿಯ ಧ್ಯೇಯಗಳನ್ನು ಅಳವಡಿಸಿಕೊಂಡ ಕರ್ನಾಟಕ ಇತರೆ ರಾಜ್ಯಗಳಿಗಿಂತ ಮುಂದಿದೆ ಎಂದು ಕಸ್ತೂರಿ ರಂಗನ್ ಹೇಳಿದರು. ಸಭೆಯಲ್ಲಿ ವಿಧಾನ ಪರಿಷತ್ತಿನ ಸದಸ್ಯರಾದ ಅರುಣ್ ಶಹಾಪುರ, ಡಾ: ವೈ.ಎ.ನಾರಾಯಣಸ್ವಾಮಿ, ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಇಲಾಖೆ ಪ್ರಧಾನ ಕಾರ್ಯದರ್ಶಿ ಎಸ್.ಆರ್.ಉಮಾಶಂಕರ್, ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತ ಡಾ: ಕೆ.ಜಿ.ಜಗದೀಶ್, ಸಮಗ್ರ ಶಿಕ್ಷಣ– ಕರ್ನಾಟಕ ಯೋಜನಾ ನಿರ್ದೇಶಕಿ ದೀಪಾ ಚೋಳನ್ ಮತ್ತಿತರರು ಭಾಗವಹಿಸಿದ್ದರು.

**ಸಿಎಂ ಅಭಿನಂದನೆ:**–ರಾಷ್ಟ್ರೀಯ ಶಿಕ್ಷಣ ನೀತಿ ಕರಡು ಸಮಿತಿಯ ಅಧ್ಯಕ್ಷ ಹಿರಿಯ ವಿಜ್ಞಾನಿ ಕಸ್ತೂರಿ ರಂಗನ್ ಅವರನ್ನು ಸಿಎಂ ಯಡಿಯೂರಪ್ಪ ಅಭಿನಂದಿಸಿದರು. 2019ರ ಮೇನಲ್ಲಿ ಹೊಸ ಶಿಕ್ಷಣ ನೀತಿಯ ಕರಡು ವರದಿಯನ್ನು ಕೇಂದ್ರ ಸರ್ಕಾರಕ್ಕೆ ಕಸ್ತೂರಿ ರಂಗನ್ ಸಲ್ಲಿಸಿದ್ದರು. ಈಗ ಅವರ ವರದಿಯನ್ನು ಕೇಂದ್ರ ಸರ್ಕಾರ ಅನುಮೋದಿಸಿದೆ. ಈ ಹಿನ್ನೆಲೆಯಲ್ಲಿ ಶಾಲು ಹೊದಿಸಿ, ಸನ್ಮಾನಿಸಲಾಯಿತು.

**ಕಸ್ತೂರಿ ರಂಗನ್‌ಗೆ ಅಭಿನಂದನೆ:** ರಾಷ್ಟ್ರೀಯ ಶಿಕ್ಷಣ ನೀತಿ ಸಮಿತಿ ಅಧ್ಯಕ್ಷರಾದ ಡಾ: ಕೆ.ಕಸ್ತೂರಿ ರಂಗನ್ ಅವರೊಂದಿಗೆ ವೆಬಿನಾರ್ ಮೂಲಕ ಮಾತನಾಡಿದ ಶಿಕ್ಷಣ ಸಚಿವರು ವಿವಿಧ ಸ್ತರಗಳ, ನಾನಾ ಅಂತರಗಳಿರುವ ಈ ರಾಷ್ಟ್ರದ ಎಲ್ಲರಿಗೂ ಅನ್ವಯವಾಗಬಹುದಾದ ನೂತನ ಶಿಕ್ಷಣ ನೀತಿಯನ್ನು ಶ್ರಮವಹಿಸಿ ರೂಪಿಸಿದ್ದಕ್ಕೆ ಕಸ್ತೂರಿ ರಂಗನ್ ಅವರಿಗೆ ಕರ್ನಾಟಕ ಸರ್ಕಾರದ ಪರವಾಗಿ ಅಭಿನಂದನೆ ಸಲ್ಲಿಸಿದರು. 34 ವರ್ಷಗಳ ಬಳಿಕ ಇಂದಿನ ಹಾಗೂ ಭವಿಷ್ಯದ ಶೈಕ್ಷಣಿಕ ಸವಾಲುಗಳನ್ನು ಗಮನದಲ್ಲಿಟ್ಟುಕೊಂಡು ರೂಪಿಸಲಾಗಿರುವ ರಾಷ್ಟ್ರೀಯ ಶಿಕ್ಷಣ ನೀತಿ ಸಮಗ್ರ ನೀತಿಯಾಗಿದೆ. ಇದು ಸರ್ವರಿಗೂ ಉತ್ತಮ ಗುಣಮಟ್ಟದ ಶಿಕ್ಷಣ ನೀಡುವ ಮೂಲಕ ಸಮಾಜವನ್ನು ಒಂದು ಸುಸ್ಥಿರ, ಸಮಾನ ಹಾಗೂ ಜೀವಂತಿಕೆಯುಳ್ಳ ಸಮಾಜವನ್ನಾಗಿ ಮಾರ್ಪಡಿಸಲು ಶ್ರಮಿಸುವ ಒಂದು ಗಟ್ಟಿ ನೀತಿ. ಇದನ್ನು ಅನುಷ್ಠಾನಗೊಳಿಸಲು ಸರ್ಕಾರ ಉತ್ಸುಕವಾಗಿದೆ ಎಂದು ಹೇಳಿದರು.

**ರಾಷ್ಟ್ರೀಯ ಶಿಕ್ಷಣ ನೀತಿ–2020:**–ಉನ್ನತ ಶಿಕ್ಷಣದ ಮಟ್ಟಿಗೆ ಶಿಕ್ಷಣ ನೀತಿಯಲ್ಲಿನ ಅಂಶಗಳನ್ನು ಜಾರಿ ಮಾಡಲು ನಿವೃತ್ತ ಐಎಎಸ್ ಅಧಿಕಾರಿ ಎಸ್.ವಿ.ರಂಗನಾಥ್ ಅವರ ನೇತೃತ್ವದ ಕಾರ್ಯಪಡೆ ವರದಿ ಸಿದ್ಧಪಡಿಸುತ್ತಿದೆ. ಉಪ ಮುಖ್ಯಮಂತ್ರಿ ಡಾ:ಸಿ.ಎನ್.ಅಶ್ವತ್ಥನಾರಾಯಣ ಅವರು ಈ ಮಾಹಿತಿ ನೀಡಿದ್ದಾರೆ. ಆಗಸ್ಟ್ 16ರಂದು ಹೇಗೆ ಜಾರಿ ಮಾಡಬೇಕೆಂಬ ಬಗ್ಗೆ ಒಂದು ವಿವರಣೆ ನೀಡಲಿದೆ. 20ರಂದು ಸಮಗ್ರ ವರದಿ ನೀಡಲಿದೆ. ಅದಾದ ಮೇಲೆ ಶಿಕ್ಷಣ ನೀತಿ ಜಾರಿಯ ಬಗ್ಗೆ ನಿರ್ಧಾರ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ.

ಆಧಾರ:ಉದಯವಾಣಿ, ದಿನಾಂಕ:01.08.2020